ಜನದನಿಯ ಸಾರಥಿ
ವಾರ್ತಾ ಭಾರತಿ

# ನನ್ನಜ್ಜ ಕಣ್ಣಪ್ಪ ನನ್ನ ಬರವಣಿಗೆಗೆ ಪ್ರಥಮ ಪ್ರೇರಣೆ: ಶ್ಯಾಮಲಾ ಮಾಧವ



ಮಂಗಳೂರು, ಸೆ.9: ನಾವೆಲ್ಲರೂ ಕಾನಾಟ (ದಪ್ಪ ಕನ್ನಡಕ ಧರಿಸುವ) ಅಜ್ಜ ಎಂದೇ ಕರೆಯುತ್ತಿದ್ದ ನಮ್ಮಜ್ಜ ಲೂವಿಸ್ ಕಣ್ಣಪ್ಪರಿಂದಲೇ ಬರವಣಿಗೆಗೆ ಮೊದಲ ಪ್ರೇರಣೆ ನನಗೆ ದೊರೆಯಿತು ಎಂದು ಮುಂಬೈಯ ಖ್ಯಾತ ಕನ್ನಡ ಲೇಖಕಿ ಶ್ಯಾಮಲಾ ಮಾಧವ ಹೇಳಿದ್ದಾರೆ.

ಹೊಸದಿಲ್ಲಿಯ ಸಾಹಿತ್ಯ ಅಕಾಡಮಿಯು ಕೊಂಕಣಿ ಸಾಹಿತಿಗಳು ಮತ್ತು ಕಲಾವಿದರ ಸಂಘಟನೆಯ ಆಶ್ರಯದಲ್ಲಿ ಮಂಗಳೂರಿನ ಸಂತ ಅಲೋಶಿಯಸ್ ಕಾಲೇಜಿನಲ್ಲಿ ಇತ್ತೀಚೆಗೆ ಆಯೋಜಿಸಿದ್ದ 'ಥ್ರೂ ಮೈ ವಿಂಡೊ' ಕಾರ್ಯಕ್ರಮ ಸರಣಿಯಲ್ಲಿ ಕೊಂಕಣಿಯ ಪ್ರಥಮ ಪತ್ರಿಕೆ 'ದಿರ್ವೆಂ' ಸ್ಥಾಪಕ-ವ್ಯವಸ್ಥಾಪಕ ಲೂವಿಸ್ ಕಣ್ಣಪ್ಪರ ಬದುಕು-ಬರಹದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಸ್ವಾತಂತ್ರ್ಯ ಪೂರ್ವದಲ್ಲಿ ಮದ್ರಾಸ್ ವಿವಿಯಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಎಂ.ಎ. ಮತ್ತು ಎಲ್.ಟಿ. ಪದವಿ ಪಡೆದಿದ್ದ ಲೂವಿಸ್ ಕಣ್ಣಪ್ಪ ಮಂಗಳೂರು ಹಂಪನಕಟ್ಟೆಯ ಸರಕಾರಿ ಕಾಲೇಜ (ಇಂದಿನ ವಿವಿ ಕಾಲೇಜು)ನಲ್ಲಿ ಪ್ರಾಂಶುಪಾಲರಾಗಿ, ನಂತರ ದ.ಕ. ಜಿಲ್ಲೆಯ ಶಿಕ್ಷಣಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು. ಗಣಿತ ಹಾಗೂ ಲ್ಯಾಟಿನ್ ಭಾಷೆಯಲ್ಲಿ ಸಂತ ಅಲೋಶಿಯಸ್ ಕಾಲೇಜಿಗೆ ಪ್ರಪ್ರಥಮ ಬಾರಿ ರ್‍ಯಾಂಕ್ ತಂದುಕೊಟ್ಟ ಹೆಗ್ಗಳಿಕೆ ಕಣ್ಣಪ್ಪರದ್ದು ಎಂದರು.

ಸಾಹಿತ್ಯ ಅಕಾಡಮಿಯ ಕೊಂಕಣಿ ಭಾಷಾ ಸಲಹಾ ಸಮಿತಿ ಸದಸ್ಯ ಎಚ್.ಎಂ. ಪೆರ್ನಾಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು.

ಉಪನ್ಯಾಸದ ನಂತರ ನಡೆದ ಸಂವಾದದಲ್ಲಿ ಎನ್.ಜಿ.ಮೋಹನ್ ಭಾಗವಹಿಸಿದ್ದರು.

ಸಾಹಿತ್ಯ ಅಕಾಡಮಿಯ ಕಾರ್ಯಕಾರಿ ಸಮಿತಿ ಸದಸ್ಯ, ಕೊಂಕಣಿ ವಿಭಾಗದ ಮುಖ್ಯಸ್ಥ - ಕವಿ ಮೆಲ್ವಿನ್ ರೊಡ್ರಿಗಸ್, ಸಂತ ಅಲೋಶಿಯಸ್ ಕಾಲೇಜಿನ ಕೊಂಕಣಿ ಸಂಸ್ಥೆಯ ಮುಖ್ಯಸ್ಥ ವಂ. ಡಾ.ಮೆಲ್ವಿನ್ ಪಿಂಟೊ, ವಿಶನ್ ಕೊಂಕಣಿ ಪ್ರವರ್ತಕ, ಅನಿವಾಸಿ ಉದ್ಯಮಿ ಮೈಕಲ್ ಡಿಸೋಜ, ಸಿಎಸ್‌ಕೆ ಮಂಗಳೂರು ಇದರ ಅಧ್ಯಕ್ಷ ಕ್ಯಾಪ್ಟನ್ ವಿನ್ಸೆಂಟ್ ಫಾಯ್ಸ್, ಎಂ.ಸಿ.ಸಿ. ಬ್ಯಾಂಕ್‌ನ ಅಧ್ಯಕ್ಷ ಅನಿಲ್ ಲೋಬೊ, ಎಡುಕೇರ್ ವಿದ್ಯಾರ್ಥಿ ನಿಧಿಯ ಸಂಚಾಲಕ ಸ್ಟೀವನ್ ಪಿಂಟೊ ಮತ್ತು ಓಸ್ವಲ್ಡ್ ರೊಡ್ರಿಗಸ್, ಕೊಂಕಣಿ ಸಾಹಿತಿ ಮತ್ತು ಕಲಾವಿದರ ಸಂಘಟನೆಯ ಅಧ್ಯಕ್ಷ ರೊನಾಲ್ಡ್ ಸಿಕ್ವೇರಾ, ಕಾರ್ಯದರ್ಶಿ, ಫ್ಲೋರಿನ್ ರೋಚ್, ಕೋಶಾಧಿಕಾರಿ ರೋಶನ್ ಮಾಡ್ತಾ, ಲೂವಿಸ್ ಕಣ್ಣಪ್ಪ ಕುಟುಂಬದ ಸದಸ್ಯರು ಈ ಸಂದರ್ಭ ಉಪಸ್ಥಿತರಿದ್ದರು.